ರಾಜ್ಯದ ಪ್ರತಿ ಜಿಲ್ಲೆಯ ಮಾದರಿ ಗ್ರಾಮದ ಅಭಿವೃದ್ಧಿ

85 (153)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದವರು ಪ್ರತಿ ಜಿಲ್ಲೆಗೆ ಒಂದು ಗ್ರಾಮವನ್ನು ಮಾದರಿ ಗ್ರಾಮವಾಗಿ ಅಭಿವೃದ್ಧಿ ಪಡಿಸಲು ಉದ್ದೇಶಿಸಿದ್ದಾರೆಯೇ?

ಆ) ನೆರೆಯ ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಒಂದು ಗ್ರಾಮದಂತೆ ಮಾದರಿ ಗ್ರಾಮವನ್ನಾಗಿ ಅಭಿವೃದ್ಧಿ ಪಡಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಮಾದರಿ ಗ್ರಾಮಕ್ಕೆ ಇರಬೇಕಾದ ಅಳತೆಗೋಲುಗಳೇನು?

ಈ) ಸರ್ಕಾರೇತರ ಸಂಸ್ಥೆಗಳು ಇದರಲ್ಲಿ ಭಾಗವಹಿಸುವುದೆ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಹೌದು.

ಆ) ಇಲ್ಲ.

ಇ) ಸ್ವಸ್ತಿ ಮಾದರಿ ಗ್ರಾಮವನ್ನು ಆಯ್ಕೆ ಮಾಡುವಾಗ ತೀರ ಹಿಂದುಳಿದ ಗ್ರಾಮವಾಗಿರಬೇಕು. ಜನಸಂಖ್ಯೆ 2000ರಿಂದ 3000 ರೊಳಗೆ ಇರಬೇಕು. ಗ್ರಾಮದ ಅಭಿವೃದ್ಧಿಗೆ ಸರ್ಕಾರೇತರ ಸಂಸ್ಥೆಗಳು ಖಾಸಗೀ ಸಂಸ್ಥೆಯವರು ಮಾರ್ಗಸೂಚಿಯಂತೆ ಗ್ರಾಮದ ಅಭಿವೃದ್ಧಿಗಾಗಿ ತಯಾರಿಸಿದ ಯೋಜನೆಯ ಶೇಕಡ 40ರಷ್ಟು ಹಣವನ್ನು ನೀಡಲು ಮುಂದೆ ಬರುವವರಿರಬೇಕು. ಹಿಂದುಳಿದ ಗ್ರಾಮವನ್ನು ಆಯ್ಕೆ ಮಾಡಿದ ನಂತರ ಮೂಲಭೂತ ಸೌಲಭ್ಯಗಳಾದ ರಸ್ತೆ, ಶಾಲೆ, ಆಸ್ಪತ್ರೆ, ಭೂಸಾರ, ನೈರ್ಮಲ್ಯ, ಮರಗಳು, ವಸತಿ ಮೊದಲಾದವುಗಳನ್ನು ಸ್ವಸ್ತಿ ಗ್ರಾಮ ಯೋಜನೆಯಡಿಯಲ್ಲಿ ಒದಗಿಸಲಾಗುವುದು.

ಈ) ಹೌದು.

ರಾಜ್ಯ ಪಂಚಾಯತ್ ಪರಿಷತ್ತು

86 (69)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು

ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಪಂಚಾಯತ್ ಪರಿಷತ್ ಎಂದು ಸ್ಥಾಪಿಸಲಾಯಿತು. ಇದರ ಕಾರ್ಯ ಯೋಜನೆಗಳೇನು? ಈ ಯೋಜನೆಗಳು ಯಾವಾಗಿನಿಂದ ಜಾರಿಗೆ ಬಂದಿದೆ?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಕರ್ನಾಟಕ ರಾಜ್ಯ ಪಂಚಾಯತ್‌ಪರಿಷತ್‌ನ ಉದ್ಘಾಟನೆಯನ್ನು ದಿನಾಂಕ: 2-12-97ರಂದು ಮಾಡಲಾಗಿದೆ. ಅಂದಿನಿಂದ ಇದು ಕಾರ್ಯ ನಿರ್ವಹಿಸುತ್ತಿದೆ. ಚುನಾಯಿತ ಪ್ರತಿನಿಧಿಗಳು ಪಂಚಾಯತ್‌ರಾಜ್ ವ್ಯವಸ್ಥೆಯನ್ನು ಸುಧಾರಿಸುವ ದಿಸೆಯಲ್ಲಿ ತಮ್ಮ ವಿಚಾರಗಳನ್ನು ವ್ಯಕ್ತಪಡಿಸುವುದಕ್ಕೆ ಮತ್ತು ತಮ್ಮ ಸಲಹೆಗಳನ್ನು ಸೂಚಿಸುವುದಕ್ಕೆ ಕರ್ನಾಟಕ ಪಂಚಾಯತ್ ಪರಿಷತ್ತು ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ.

ಜಿಲ್ಲಾ ಪಂಚಾಯತ್‌ಗಳಿಗೆ ನಿಗದಿಪಡಿಸಿದ ಹಣ

87 (154)

ಶ್ರೀ ಬಿ.ಎಸ್.ಯಡಿಯೂರಪ್ಪ (ಶಿಕಾರಿಪುರ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1996-97, 1997-98ನೇ ಸಾಲಿನಲ್ಲಿ ಜಿಲ್ಲಾ ಪಂಚಾಯತ್‌ವಾರು ಯೋಜನೆ ಹಾಗೂ ಯೋಜನೇತರಕ್ಕೆ ನಿಗಧಿ ಪಡಿಸಿದ ಹಣವೆಷ್ಟು? ಬಿಡುಗಡೆ ಮಾಡಿದ ಹಣವೆಷ್ಟು ಹಾಗೂ ಖರ್ಚಾದ ಹಣವೆಷ್ಟು?

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಮಾಹಿತಿಯನ್ನು ಅನುಬಂಧ 1 ಮತ್ತು 2ರಲ್ಲಿ ನೀಡಲಾಗಿದೆ.